# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**01.11.2024 / 14.30 hrs**

ಮುಖ್ಯಾಂಶಗಳು

**೧. ನಾಡಿನೆಲ್ಲೆಡೆ ಕನ್ನಡ ರಾಜ್ಯೋತ್ಸವ ಸಂಭ್ರಮ; ಭಾಷೆ ಹಾಗೂ ಕನ್ನಡ ಸಂಸ್ಕೃತಿಯನ್ನು ಉಳಿಸಿ-ಬೆಳೆಸಲು ಮುಖ್ಯಮಂತ್ರಿ ಕರೆ**

**೨. ವಿಧಾನಸೌಧದಲ್ಲಿಂದು ರಾಜ್ಯೋತ್ಸವ ಮತ್ತು ಕರ್ನಾಟಕ ಸಂಭ್ರಮ-೫೦ರ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ**

**೩. ದೇಶದೆಲ್ಲೆಡೆ ದೀಪಾವಳಿ ಹಬ್ಬ ಆಚರಣೆ; ವಿವಿಧ ಗಣ್ಯರಿಂದ ಶುಭಾಶಯ**

**೪. ರಾಜ್ಯ ವಿಧಾನಸಭಾ ಉಪಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಜಾಗೃತಿ ಕಾರ್ಯಕ್ರಮ; ಪಾರದರ್ಶಕ, ನ್ಯಾಯಸಮ್ಮತ ಚುನಾವಣೆಗಾಗಿ ಸಿ-ವಿಜಿಲ್ ಆಪ್**

**<><*<><>*><>**

ಕನ್ನಡ ನಾಡು ಉದಯವಾಗಿ ಇಂದಿಗೆ ೬೯ ವರ್ಷಗಳು ಸಂದಿವೆ. ರಾಜ್ಯೋತ್ಸವದ ಅಂಗವಾಗಿ ನಾಡಿನಾದ್ಯಂತ ಇಂದು ಕನ್ನಡದ ಹಿರಿಮೆ, ಗರಿಮೆ ಮೆರೆಸುವ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯೋತ್ಸವದ ಪ್ರಯುಕ್ತ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿಂದು ಬೆಳಿಗ್ಗೆ ಆಯೋಜಿಸಿದ್ದ, ವರ್ಣರಂಜಿತ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಾಥಮಿಕ ಶಾಲಾ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಶಾಸಕ ರಿಜ್ವಾನ್ ಅರ್ಷದ್ ಮತ್ತಿತರರು ಉಪಸ್ಥಿತರಿದ್ದರು. ನಂತರ ಶಾಲ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಬಳಿಕ ಮಾತನಾಡಿದ ಮುಖ್ಯಮಂತ್ರಿ, ಕನ್ನಡದ ಕುರಿತು ಹೆಮ್ಮೆ ಮತ್ತು ಸ್ವಾಭಿಮಾನವಿದ್ದರೆ, ಕನ್ನಡವನ್ನು ಮತ್ತಷು ಬೆಳೆಸಲು ಸಾಧ್ಯ. ಕನ್ನಡ ನಾಡು, ನುಡಿ, ನೆಲ, ಜಲ, ಸಂಸ್ಕೃತಿ ಹಾಗೂ ಕಲೆಯನ್ನು ಇಡೀ ನಾಡಿನ ಜನತೆಗೆ ಮತ್ತೊಮ್ಮೆ ತಿಳಿಸುವ ನಿಟ್ಟಿನಲ್ಲಿ ಇಡೀ ವರ್ಷ 'ಹೆಸರಾಯಿತು ಕರ್ನಾಟಕ, ಉಸಿರಾಯಿತು ಕನ್ನಡ' ಘೋಷವಾಕ್ಯದಡಿ, ಕರ್ನಾಟಕ ಸಂಭ್ರಮ-೫೦ ಆಚರಿಸಲಾಗುತ್ತಿದೆ, ನಾಡಿನ ಜನರು ಕನ್ನಡವನ್ನು ತಮ್ಮ ವ್ಯಾವಹಾರಿಕ ಭಾಷೆಯನ್ನಾಗಿ ಮಾಡಿಕೊಳ್ಳುವ ಜೊತೆಗೆ, ಪರಭಾಷಿಕರಿಗೆ ಕನ್ನಡ ಕಲಿಸುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು. ೨ ಸಾವಿರ ವರ್ಷಗಳ ಇತಿಹಾಸ ಇರುವ ಕನ್ನಡ ಒಂದು ಪ್ರಾಚೀನ ಭಾಷೆ. ಆದ್ದರಿಂದ, ಬೇರೆ ಭಾಷೆಗಳನ್ನು ಕಲಿಯುವ ಮೂಲಕ ಭಾಷಾ ಸಂಪತ್ತು ಬೆಳೆಸುವುದರಲ್ಲಿ ಯಾವುದೇ ತಪ್ಪಿಲ್ಲ. ಆದರೆ ಕನ್ನಡ ಬಳಕೆಗೆ ಇದರಿಂದ ಕುಂದುಂಟಾಗಬಾರದು ಎಂದರು.

ಬಳಿಕ ಮಾತನಾಡಿದ ಡಿ.ಕೆ.ಶಿವಕುಮಾರ್, ಕನ್ನಡವೇ ನಮ್ಮೆಲ್ಲರ ಮನಸ್ಸಿನ ಭಾಷೆಯಾಗಿದ್ದು, ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿದೆ. ವಿಶ್ವದ ಮೂಲ-ಮೂಲೆಗಳಲ್ಲಿರುವ ಅನೇಕ ಕನ್ನಡಿಗರು ಕನ್ನಡ ಹಾಗೂ ಸಂಸ್ಕೃತಿ ಪಸರಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.

**<><*<><>*><>**

ರಾಜ್ಯೋತ್ಸವ ಪ್ರಶಸ್ತಿ ೨೦೨೪ ಮತ್ತು ಕರ್ನಾಟಕ ಸಂಭ್ರಮ-೫೦ರ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ ಹಾಗೂ ಸಮಾರೋಪ ಸಮಾರಂಭ ಇಂದು ಸಂಜೆ ೪ ಗಂಟೆಗೆ ವಿಧಾನಸೌಧದ ಮುಂಭಾಗ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹಾಗೂ ಸೇರಿ ಮತ್ತಿತರ ಗಣ್ಯ ವ್ಯಕ್ತಿಗಳು ಪಾಲ್ಗೊಳ್ಳಲಿದ್ದಾರೆ. ಏತನ್ಮಧ್ಯೆ, ಕರ್ನಾಟಕ ಸಂಭ್ರಮ-೫೦ ಅಭಿಯಾನದ ಸುವರ್ಣ ಮಹೋತ್ಸವ ಪ್ರಶಸ್ತಿಯ ಮೊತ್ತವನ್ನು ೫೦ ಸಾವಿರದಿಂದ ೧ ಲಕ್ಷ ರೂಪಾಯಿಗೆ ಹೆಚ್ಚಳ ಮಾಡಲಾಗಿದೆ ಎಂದು ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ.

<><*<><>*><>

ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಎಲ್ಲಾ ಜಿಲ್ಲೆಗಳಲ್ಲೂ ಸಂಭ್ರಮ ಮನೆಮಾಡಿದ್ದು, ಆಯಾ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಿ, ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ್ದಾರೆ. ರಾಯಚೂರಿನಲ್ಲಿ ಇಂದು ರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನಾಡದೇವತೆ ಭುವನೇಶ್ವರಿಗೆ ಪೂಜೆ ಹಾಗೂ ರಾಷ್ಟ್ರ ಧ್ವಜಾರೋಹಣವನ್ನು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ನೆರವೇರಿಸಿದರು. ಕೊಪ್ಪಳ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ರಾಷ್ಟ್ರ ಬಾವುಟ ಹಾರಿಸುವ ಮೂಲಕ ಚಾಲನೆ ನೀಡಿದರು. ಬಳ್ಳಾರಿಯ ಮುನಿಸಿಪಲ್ ಹೈಸ್ಕೂಲ್ ಮೈದಾನದಲ್ಲಿ ೬೯ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ ನಡೆಯಿತು. ಕಂದಾಯ ಸಚಿವ ಕೃಷ್ಣ ಬೈರೇಗೌಡ ಭುವನೇಶ್ವರಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಐತಿಹಾಸಿಕ ಹಂಪಿಯ ಭುವನೇಶ್ವರಿ ದೇವಸ್ಥಾನದಿಂದ ತಂದ ಜ್ಯೋತಿ ಸ್ವೀಕಾರ ಮಾಡಿದರು. ರಾಮನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ೬೯ನೇ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ, ಸಂದೇಶ ನೀಡಿದರು. ಗದಗದಲ್ಲಿ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ೬೯ನೇ ರಾಜ್ಯೋತ್ಸವ ಸಮಾರಂಭ ಸಡಗರ ಸಂಭ್ರಮದಿಂದ ಜರುಗಿತು. ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು. ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ವಿಜಯಪುರದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವ ಸಂದೇಶ ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೬೯ನೇ ಕನ್ನಡ ರಾಜ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಧ್ವಜಾರೋಹಣ ನೆರವೇರಿಸಿದರು. ಮಾತನಾಡಿದ ಅವರು, ಕನ್ನಡ ಸಾಹಿತ್ಯಕ್ಕೆ ಹಾಗೂ ಏಕೀಕರಣಕ್ಕೆ ದುಡಿದ ಮಹನೀಯರನ್ನು ನಾವು ಸ್ಮರಿಸಬೇಕಿದೆ.ಕನ್ನಡ ಕಲಿಕೆಗೆ ನಾವು ಪ್ರೋತ್ಸಾಹ ನೀಡಿ, ಕನ್ನಡದ ಆಸ್ಮಿತೆಯನ್ನು ಉಳಿಸಿಕೊಳ್ಳಬೇಕಿದೆ.
ಕನ್ನಡ ಭಾಷೆ ಮಾತನಾಡುವವರು ಕಾವೇರಿಯಿಂದ ಗೋದಾವರಿಯವರೆಗೆ ಇರುವುದನ್ನು ಕಾಣುತ್ತೇವೆ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮೈಸೂರಿನಲ್ಲಿ ಕನ್ನಡ ರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ನಮ್ಮ ಸಂಸ್ಕೃತಿ, ನಮ್ಮ ಭಾಷೆ, ನಮ್ಮತನಕ್ಕೆ ಶಕ್ತಿ ತುಂಬುವ ದಿನವಿದು ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಅವರು ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ಹಾವೇರಿಯ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿಂದು ೬೯ನೇ ಕನ್ನಡ ರಾಜ್ಯೋತ್ಸವ ಧ್ವಜಾರೋಹಣವನ್ನು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು. ಇದಕ್ಕೂ ಮುನ್ನ ಹಾವೇರಿಯ ಹುತಾತ್ಮ ಮೈಲಾರ ಮಹದೇವ ವೃತ್ತದಿಂದ ಭುವನೇಶ್ವರಿ ತಾಯಿ ಭಾವಚಿತ್ರ ಹಾಗೂ ಸ್ಥಬ್ಧಚಿತ್ರಗಳ ಮೆರವಣಿಗೆ ಅವರು ಚಾಲನೆ ನೀಡಿದರು.

<><*<><>*><>

ಇಂದು ೬೯ನೇ ಕರ್ನಾಟಕ ರಾಜ್ಯೋತ್ಸವ ಸಂಭ್ರಮದ ಹಿನ್ನೆಲೆಯಲ್ಲಿ ವಿವಿಧ ಗಣ್ಯರು ಶುಭಾಶಯ ತಿಳಿಸಿದ್ದಾರೆ.
ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಇಂದು ಆಂಧ್ರಪ್ರದೇಶ, ಛತ್ತೀಸ್‌ಗಢ, ಹರಿಯಾಣ, ಕರ್ನಾಟಕ, ಕೇರಳ, ಮಧ್ಯಪ್ರದೇಶ, ಪಂಜಾಬ್, ತಮಿಳುನಾಡು, ಲಕ್ಷದ್ವೀಪ ಮತ್ತು ಪುದುಚೇರಿ ಜನರಿಗೆ ತಮ್ಮ ರಾಜ್ಯಗಳ ರಾಜ್ಯೋತ್ಸವದ ದಿನದ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ಅಭಿವೃದ್ಧಿಯ ವಿಷಯದಲ್ಲಿ ಈ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಜನರು ನೀಡಿದ ಕೊಡುಗೆಗಳನ್ನು ಶ್ಲಾಘಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಈ ರಾಜ್ಯಗಳ ಜನತೆಗೆ ಶುಭ ಹಾರೈಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಕನ್ನಡದಲ್ಲೇ ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಕನ್ನಡ ರಾಜ್ಯೋತ್ಸವ ಕರ್ನಾಟಕದ ಅನುಕರಣೀಯ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಗುರುತಿಸುತ್ತದೆ. ರಾಜ್ಯವು ಮಹಾನ್ ವ್ಯಕ್ತಿಗಳನ್ನು ಪಡೆದಿದ್ದು, ಅವರು ಎಲ್ಲಾ ಕ್ಷೇತ್ರಗಳಲ್ಲಿ

ಅಭಿವೃದ್ಧಿ ಮತ್ತು ನಾವೀನ್ಯತೆಗೆ ಶಕ್ತಿ ತುಂಬುತ್ತಿದ್ದಾರೆ. ಕರ್ನಾಟಕದ ಜನರು ಸದಾ ಸಂತೋಷ ಮತ್ತು ಯಶಸ್ಸಿನಿಂದ ಕೂಡಿರಲಿ ಎಂದು ಹಾರೈಸಿದ್ದಾರೆ.

**<><*<><>*><>**

ನವದೆಹಲಿಯ ಕರ್ನಾಟಕ ಸಂಘದಲ್ಲಿ ಆಯೋಜಿಸಿದ್ದ ೬೯ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕೇಂದ್ರ ರೇಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಭಾಗವಹಿಸಿ ತಾಯಿ ಭುವನೇಶ್ವರಿಗೆ ಪೂಜೆ ಸಲ್ಲಿಸಿ ಧ್ವಜಾರೋಹಣ ನೆರವೇರಿಸಿದರು. ಕರ್ನಾಟಕ ಏಕೀಕರಣಕ್ಕೆ ಹೋರಾಡಿದ ಮಹನಿಯರ ವ್ಯಕ್ತಿತ್ವವನ್ನು ರಾಷ್ಟ್ರಮಟ್ಟದಲ್ಲಿ ಪರಿಚಯಿಸುವ ನಿಟ್ಟಿನಲ್ಲಿ ಅವರ ಬಗ್ಗೆ ಇಂಗ್ಲೀಷ್ ಮತ್ತು ಹಿಂದಿ ಭಾಷೆಗಳಲ್ಲಿ ಪ್ರಕಟಣೆಗಳನ್ನು ಹೊರತರುವ ಕೆಲಸವಾಗಬೇಕು. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕನ್ನಡದ ಮತ್ತು ಕನ್ನಡ ಸಂಘಟನೆಗಳ ಅಸ್ತಿತ್ವವನ್ನು ಕಾಯ್ದುಕೊಳ್ಳಲು ದೆಹಲಿ ಕನ್ನಡಿಗರೆಲ್ಲರೂ ಸಮಾನ ಮನಸ್ಸಿನಿಂದ ಒಗಟ್ಟಾಗಿ ಕೆಲಸ ಮಾಡಲು ಕರೆ ನೀಡಿದರು.

**<><*<><>*><>**

ದೇಶಾದ್ಯಂತ ಬೆಳಕಿನ ಹಬ್ಬ ದೀಪಾವಳಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಅಂಧಕಾರದಿಂದ ಬೆಳಕಿನೆಡೆಗೆ ದಾರಿದೀಪವಾದ ಈ ಹಬ್ಬವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಮನೆಗಳು, ಅಂಗಡಿ ಮುಂಗಟ್ಟುಗಳು, ದೇಗುಲಗಳನ್ನು ರಂಗುರಂಗಿನ ದೀಪಗಳಿಂದ ಸಿಂಗರಿಸಲಾಗಿದೆ. ಮನೆಗಳ ಮುಂದೆ ದೀಪಗಳ ಸಾಲು ಕಂಗೊಳಿಸುತ್ತಿವೆ. ಪರಿಸರಕ್ಕೆ ಹಾನಿಯುಂಟು ಮಾಡದೇ ಹಸಿರು ಪಟಾಕಿ ಬಳಸಿ ಮಾಲಿನ್ಯಮುಕ್ತ ದೀಪಾವಳಿ ಆಚರಿಸಲಾಗುತ್ತಿದೆ. ಪಟಾಕಿ ಸಂಬಂಧಿತ ಅವಘಡಗಳಿಗೆ ತಕ್ಷಣ ಪ್ರತಿಕ್ರಿಯೆ ನೀಡಲು ಆಸ್ಪತ್ರೆಗಳು, ಅಗ್ನಿಶಾಮಕ ದಳ ಸಜ್ಜಾಗಿದೆ. ದೀಪಾವಳಿ ರಜೆಯ ಪ್ರಯುಕ್ತ ವಿವಿಧ ಸಾರಿಗೆ ಸಂಸ್ಥೆಗಳು ಮತ್ತು ರೈಲ್ವೆ ಇಲಾಖೆ ಹೆಚ್ಚುವರಿ ಬಸ್ ಮತ್ತು ರೈಲುಗಳ ವ್ಯವಸ್ಥೆ ಮಾಡಿದೆ. ನಿನ್ನೆ ನರಕ ಚತುರ್ದಶಿ ಆಚರಣೆ ಜೊತೆಜೊತೆಗೆ ಇಂದು ದೀಪಾವಳಿ ಅಮಾವಾಸ್ಯೆ ಪ್ರಯುಕ್ತ ಲಕ್ಷ್ಮಿ ಪೂಜೆಯನ್ನು ನೆರವೇರಿಸಲಾಗುತ್ತದೆ. ನಾಳೆ ಬಲಿಪಾಡ್ಯಮಿಗೆ ಭರದ ಸಿದ್ಧತೆ ನಡೆದಿದೆ. ದೀಪಾವಳಿ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಶುಭ ಹಾರೈಸಿದ್ದಾರೆ.

**<><*<><>*><>**

ಹಾವೇರಿ ಜಿಲ್ಲೆ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ಪ್ರಕರಣಗಳು ಕಂಡುಬಂದಲ್ಲಿ ಸಿ-ವಿಜಿಲ್ ಆಪ್ ಮೂಲಕ ವರದಿ ಮಾಡಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಪಾರದರ್ಶಕ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಭಾರತ ಚುನಾವಣಾ ಆಯೋಗ ಈ ತಂತ್ರಾಂಶವನ್ನು ಸಿದ್ಧಪಡಿಸಿದೆ. ನಾಗರಿಕ ಸ್ನೇಹಿಯಾದ ಸಿವಿಜಲ್ ತಂತ್ರಾಂಶವನ್ನು ಮೊಬೈಲ್ ಪ್ಲೇಸ್ಟೋರ್‌ನಿಂದ ಡೌನ್‌ಲೋಡ್ ಮಾಡಿ ಈ ಮೂಲಕ ದೂರು ನೀಡಬಹುದು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೬.೪೦ ಕ್ಕೆ <>*><>**